ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ನೆರೆ ಹಾವಳಿಯಿಂದ ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿರುವ ಕುರಿತು

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

202 (282) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೆರೆ ಹಾವಳಿಯಿಂದಾಗಿ ತೋಟಗಾರಿಕೆ ಬೆಳೆಗಾರರಿಗೆ ಆಗಿರುವ ಒಟ್ಟು ನಷ್ಟವೆಷ್ಟು;

(ಆ) ಇಂತಹ ರೈತರಿಗೆ ಸರ್ಕಾರ ನೀಡಿರುವ ಪರಿಹಾರದ ಹಣವೆಷ್ಟು;

(ಇ) ಲಾಕ್‌ಡೌನ್ ಸಂದರ್ಭದಲ್ಲಿ ತೋಟಗಾರಿಕಾ ಬೆಳೆಗಳನ್ನು ಮಾರುಕಟ್ಟೆಗಳಲ್ಲಿ ಮಾರಾಟ ಮಾಡಲು ಸಾಧ್ಯವಾಗದೆ ಅಪಾರ ನಷ್ಟ ಅನುಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಒಟ್ಟು ಎಷ್ಟು ಪರಿಹಾರವನ್ನು ರೈತರಿಗೆ ನೀಡಲಾಗಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)